ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	2452
ಸದಸ್ಯರ ಹೆಸರು	ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	30.03.2021
ಉತ್ತರಿಸುವ ಸಚಿವರು	ಗಣಿ ಮತ್ತು ಭೂವಿಜ್ಞಾನ ಸಚಿವರು.

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕಳೆದ 3 ವರ್ಷಗಳಲ್ಲಿ ಅಕ್ರಮ ಕಲ್ಲು ಗಣಿಗಾರಿಕೆಗಳನ್ನು ಎಷ್ಟು ಕಡೆ ಪತ್ತೆ ಹಚ್ಚಲಾಗಿದೆ; ಆ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;</td><td>ರಾಜ್ಯದಲ್ಲಿ ಅಕ್ರಮವಾಗಿ ಕಲ್ಲು ಗಣಿಗಾರಿಕೆ ನಡೆಸುತ್ತಿರುವವರ ವಿರುದ್ಧ ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ, 1957 ಮತ್ತು ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994 ರಂತೆ ಮೊಕದ್ದಮೆಗಳನ್ನು ದಾಖಲಿಸಿ ಮತ್ತು ದಂಡ ವಿಧಿಸಿ, ಸಂಗ್ರಹಿಸಲು ಕಟ್ಟುನಿಟ್ಟಿನ ಕ್ರಮ ಜರುಗಿಸಲಾಗುತ್ತಿದೆ.

ಕಳೆದ ಮೂರು ವರ್ಷಗಳಲ್ಲಿ ಅನಧಿಕೃತ ಕಲ್ಲುಗಣಿಗಾರಿಕೆ ನಡೆಸುತ್ತಿದ್ದ 1.259 ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದ್ದು, ಅನಧಿಕೃತ ಗಣಿಗಾರಿಕೆ ನಡೆಸುತ್ತಿದ್ದವರ ವಿರುದ್ಧ 324 ಮೊಕದ್ದಮೆಗಳನ್ನು ದಾಖಲಿಸಿ, ರೂ. 2,903.13 ಲಕ್ಷಗಳ ದಂಡವನ್ನು ಸಂಗ್ರಹಿಸಲಾಗಿರುತ್ತದೆ.
ವಿವರಗಳು ಕೆಳಕಂಡಂತಿವೆ:

ಕಲ್ಲುಗಣಿಗಾರಿಕೆ :- (ರೂ.ಲಕ್ಷಗಳಲ್ಲಿ)
<table>
<tr><th>ಕ್ರ. ಸಂ</th><th>ವರ್ಷ</th><th>ಪತ್ತೆಹಚ್ಚಿದ ಪ್ರಕರಣ ಗಳು</th><th>ದಾಖಲಿಸಿರುವ ಮೊಕದ್ದಮೆ ಗಳ ಸಂಖ್ಯೆ</th><th>ವಸೂಲಾದ ದಂಡ</th></tr>
<tr><td>1.</td><td>2018-19</td><td>413</td><td>108</td><td>1213.37</td></tr>
<tr><td>2.</td><td>2019-20</td><td>266</td><td>117</td><td>908.70</td></tr>
<tr><td>3.</td><td>2020-21</td><td>580</td><td>99</td><td>781.06</td></tr>
<tr><td colspan="2">ಒಟ್ಟು</td><td>1259</td><td>324</td><td>2903.13</td></tr>
</table></td></tr>
<tr><td>ಆ)</td><td>ಅಕ್ರಮ ಗಣಿಗಾರಿಕೆ ನಡೆಯುತ್ತಿದ್ದರೂ ಕ್ರಮ ಕೈಗೊಳ್ಳದ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ;</td><td>ಅಕ್ರಮ ಗಣಿಗಾರಿಕೆ ತಡೆಗಟ್ಟಲು ಕ್ರಮ ಕೈಗೊಳ್ಳದ ಅಧಿಕಾರಿಗಳ ವಿರುದ್ಧ ಕರ್ನಾಟಕ ನಾಗರಿಕ ಸೇವಾ (ನಡತೆ) ನಿಯಮಗಳು, 1966 ರಂತೆ ಶಿಸ್ತು ಕ್ರಮ ಕೈಗೊಳ್ಳಲಾಗಿರುತ್ತದೆ.</td></tr>
</table>

ಇ)	ಅಕ್ರಮ ಗಣಿಗಾರಿಕೆಗೆ ಸಂಗ್ರಹಿಸಿದ್ದ ಸ್ಫೋಟಕಗಳು ಸ್ಫೋಟಿಸಿ ಎಷ್ಟು ಕಡೆ ಅನಾಹುತಗಳು ಸಂಭವಿಸಿವೆ; ಅನಾಹುತಕ್ಕೊಳಗಾದವರಿಗೆ ಯಾವ ರೀತಿಯ ಪರಿಹಾರಗಳನ್ನು ನೀಡಲಾಗಿದೆ?	ಚಾಮರಾಜನಗರ ಜಿಲ್ಲೆ ಮತ್ತು ತಾಲ್ಲೂಕು, ಮಕ್ಕಡಹಳ್ಳಿ ಗ್ರಾಮದಲ್ಲಿ ಶ್ರೀ ಸ್ವಾಮಿ ಎಂಬುವರು ಪರವಾನಗಿ ಹೊಂದಿರುವ ಕಲ್ಲುಗಣಿ ಗುತ್ತಿಗೆ ಪ್ರದೇಶದಲ್ಲಿ ಇಟ್ಟಿದ್ದ ಸ್ಫೋಟಕ ಸಿಡಿದು, ದಿನಾಂಕ 28.12.2020 ರಂದು ಶ್ರೀ ಮಹದೇವಶೆಟ್ಟಿ ಎಂಬುವರು ಮೃತಪಟ್ಟಿರುತ್ತಾರೆ. ಈ ಸಂಬಂಧ ಚಾಮರಾಜನಗರ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ದಿನಾಂಕ 29.12.2020 ರಂದು ಪ್ರಕರಣ ಸಂಖ್ಯೆ 141/2020 ದಾಖಲಾಗಿರುತ್ತದೆ. ಕಲ್ಲುಗಣಿ ಗುತ್ತಿಗೆದಾರರು ಮೃತರ ಕುಟುಂಬದ ಸದಸ್ಯರಿಗೆ ರೂ.5.00 ಲಕ್ಷಗಳ ಪರಿಹಾರ ನೀಡಿರುತ್ತಾರೆ. ಶಿವಮೊಗ್ಗ ಜಿಲ್ಲೆ ಮತ್ತು ತಾಲ್ಲೂಕು, ಕಲ್ಲಗಂಗೂರು ಗ್ರಾಮದಲ್ಲಿ ನಡೆದ ಸ್ಫೋಟದಲ್ಲಿ ಮೃತರಾದ 06 ಜನರಿಗೆ ತಲಾ ರೂ.5.00 ಲಕ್ಷ ಪರಿಹಾರವನ್ನು ಘೋಷಿಸಲಾಗಿದೆ. ಈ ಪೈಕಿ ಇಬ್ಬರು ಮೃತ ಕುಟುಂಬದ ವ್ಯಕ್ತಿಗಳಿಗೆ ಈಗಾಗಲೇ ಪರಿಹಾರ ವಿತರಣೆ ಮಾಡಲಾಗಿದೆ. ಮೃತಪಟ್ಟ ಆರು ಜನಗಳ ಪೈಕಿ ಆಂಧ್ರ ಪ್ರದೇಶದ ಮೂರು ಜನ ವ್ಯಕ್ತಿಗಳು ಮೃತಪಟ್ಟಿದ್ದು, ಆರನೇ ವ್ಯಕ್ತಿಯ ಮೃತ ದೇಹವನ್ನು ಗುರುತಿಸಲು ಸಾಧ್ಯವಾಗಿರುವುದಿಲ್ಲ. ಚಿಕ್ಕಬಳ್ಳಾಪುರ ಜಿಲ್ಲೆ, ಗುಡಿಬಂಡೆ ತಾಲ್ಲೂಕು, ಹಿರೇನಾಗವಲ್ಲಿ (ವರ್ಲಕೊಂಡ) ಗ್ರಾಮದಲ್ಲಿ ನಡೆದ ಸ್ಫೋಟದ ಘಟನೆಯಲ್ಲಿ ಆರು ಜನ ಮೃತಪಟ್ಟಿದ್ದು, ಮೃತ ಕುಟುಂಬದವರಿಗೆ ತಲಾ ರೂ.5.00 ಲಕ್ಷಗಳ ಪರಿಹಾರ ಘೋಷಿಸಲಾಗಿರುತ್ತದೆ.

ಸಂಖ್ಯೆ ಸಿಐ 642 ಎಂಎಂಎನ್ 2021

Halappa

(ಆಚಾರ್ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂವಿಜ್ಞಾನ ಹಾಗೂ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು
ವಿಕಲಚೇತನರ, ಹಿರಿಯ ನಾಗರಿಕರ
ಸಬಲೀಕರಣ ಸಚಿವರು.